ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ,
ಶ್ರೀರಂಗಪಟ್ಟಣ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ **: 47/2022**

ಚಾ.ಸಾ. **:- 20**
ಪ್ರಾ.ಸಾ. **:- 06**

| | |
|---|---|
| ಹೆಸರು | : ಪ್ರಕಾಶ್.ಬಿ.ಎಸ್. |
| ತಂದೆಯ ಹೆಸರು | : ಸಿದ್ದಯ್ಯ |
| ವಯಸ್ಸು | : 45 ವರ್ಷ |
| ಉದ್ಯೋಗ | : ಪೊಲೀಸ್ ನಿರೀಕ್ಷಕರು, ಮೈಸೂರು |
| ವಾಸಸ್ಥಳ | : ಮೈಸೂರು. |

ಪ್ರಮಾಣೀಕರಿಸಲಾದ ದಿನಾಂಕಃ- **27.04.2026.**

ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :

ನಾನು 2022 ರಿಂದ 2025 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪಿ.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 26.07.2022 ರಂದು ನಾನು ಚಾ.ಸಾ-19 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಚಾ.ಸಾ-19 ರವರ ಮೂಲಕ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ.

ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತಕ್ಕೆ ಸಂಬಂಧಿಸಿದಂತೆ ಕಾರನ್ನು ಪಂಚರ ಸಮಕ್ಷಮ ಮಹಜರ್ ಬರೆದು ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು. ಸದರಿ ವಾಹನದ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಒಟ್ಟಾಗಿ ನಿಪಿ-10 ಎಂದು ಗುರುತಿಸಲಾಯಿತು.

ಅಪಘಾತಕ್ಕೆ ಸಂಬಂಧಿಸಿದಂತೆ ಎರಡೂ ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ನಿಪಿ-14 ಎಂದು ಗುರುತಿಸಲಾಯಿತು.

ನಂತರ ಅಪಘಾತಕ್ಕೆ ಒಳಗಾದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-15 ಮತ್ತು 16 ಎಂದು ಗುರುತಿಸಲಾಯಿತು. ಮೃತರ ಮಗನಿಗೆ ದ್ವಿಚಕ್ರ ವಾಹನಕ್ಕೆ ಸಂಬಂಧಿಸಿದಂತೆ ದಾಖಲಾತಿಗಳನ್ನು ಹಾಜರುಪಡಿಸುವಂತೆ ತಿಳಿಸಿದ್ದು, ಅವರು ದಾಖಲಾತಿಗಳು ಇರುವುದಿಲ್ಲ, ಸಿಕ್ಕಿದರೆ ಹಾಜರುಪಡಿಸುತ್ತೇನೆಂದು ತಿಳಿಸಿರುತ್ತಾರೆ. ಸದರಿ ವಾಹನದ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-6 ಎಂದು ಗುರುತಿಸಲಾಗಿದೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>

IMV ವರದಿ ಪ್ರಕಾರ ಎರಡೂ ವಾಹನಗಳಿಗೂ ಯಾವುದೇ ಜಖಂ ಆಗಿರುವುದಿಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನದ ಚಾಲಕನಿಗೆ ಚಾಲನಾ ಪರವಾನಗಿ ಇತ್ತೇ ಎಂದರೆ ಇತ್ತು. ಸದರಿ

ಚಾಲನಾ ಪರವಾನಗಿಯನ್ನು ನಾನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ. ಎಂ.ಎಲ್.ಸಿ.ವರದಿಯಲ್ಲಿ ವಾಹನಗಳ ಸಂಖ್ಯೆಗಳನ್ನು ನಮೂದು ಮಾಡಿಲ್ಲ.

ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ತಪ್ಪಿನಿಂದ ಅಪಘಾತವಾಗದೇ ಇದ್ದರೂ ದೂರುದಾರರ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ **:-** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

ಪ್ರಧಾನ ಹಿರಿಯ ಸಿಜೆ ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.

**ಸಾಕ್ಷಿದಾರರ ಸಹಿ.**